ಬೆಂಗಳೂರು ನಗರದಲ್ಲಿ ಶಾಲಾ ವೇಳೆ ಬದಲಾವಣೆ ಮಾಡುವುದು

3548(3988) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ವಾಹನ ಸಂಚಾರ ಒತ್ತಡ ನಿಯಂತ್ರಿಸಲು ಶಾಲಾ ವೇಳೆಗಳನ್ನು ಬದಲಾವಣೆ ಮಾಡಲು ಸರ್ಕಾರ ನಿರ್ಧರಿಸಿದೆಯೇ :

ಆ) ಹಾಗಿದ್ದಲ್ಲಿ ಶಾಲಾ ಮುಖ್ಯಸ್ಥರೊಡನೆ ಸಮಾಲೋಚಿಸಿ, ಶಿಕ್ಷಣ ಇಲಾಖೆ ಅಧಿಕಾರಿಗಳೊಡನೆ ಚರ್ಚಿಸಲಾಗಿದೆಯೇ :

ಇ) ಬೆಳಿಗ್ಗೆ 7–30ಕ್ಕೆ ಶಾಲೆಗಳನ್ನು ಪ್ರಾರಂಭಿಸಲು ಸರ್ಕಾರ ಉದ್ದೇಶಿಸಿದೆಯೇ :

ಈ) ಇದರಿಂದ ತಂದೆ ತಾಯಿಯರಿಗೆ ಅನಾನುಕೂಲವಾಗುವುದಿಲ್ಲವೇ ?

ಪ್ರೊ॥ ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಈ) ಉದ್ಭವಿಸುವುದಿಲ್ಲ

ಶಿವಾಜಿನಗರ ವಿಧಾನ ಸಭಾ ಕ್ಷೇತ್ರದಲ್ಲಿ ಸಂಚಾರಿ ಶಾಲೆಗಳನ್ನು ಆರಂಭಿಸುವುದು -

3549(4055) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸಾರ್ವಜನಿಕ ಶಿಕ್ಷಣ ಇಲಾಖೆ ಸಂಚಾರಿ ಶಾಲೆಗಳನ್ನು ಬೆಂಗಳೂರು ನಗರದಲ್ಲಿ ನಡೆಸುತ್ತಿದೆಯೇ ; ಹಾಗಿದ್ದಲ್ಲಿ ಎಷ್ಟು ಸಂಚಾರಿ ವಾಹನಗಳನ್ನು ಇದಕ್ಕಾಗಿ ಉಪಯೋಗಿಸಲಾಗಿದೆ ಹಾಗೂ ಎಷ್ಟು ಮಕ್ಕಳು ಈ ಸಂಚಾರಿ ಶಾಲೆಯಲ್ಲಿ ದಾಖಲಾಗಿದ್ದಾರೆ :

ಆ) ಈ ಸಂಚಾರಿ ಶಾಲೆಯನ್ನು ಶಿವಾಜಿನಗರದ ವಿಧಾನಸಭಾ ಕ್ಷೇತ್ರದಲ್ಲಿ ನಡೆಸಲಾಗುತ್ತಿದೆಯೇ :

ಇ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ವಾಹನಗಳನ್ನು ದಾನವಾಗಿ ಪಡೆಯಲು ಸರ್ಕಾರ ಕ್ರಮ ಕೈಗೊಂಡಿದೆಯೇ :

ಈ) ಶಿವಾಜಿನಗರ ವಿಧಾನಸಭಾ ಕ್ಷೇತ್ರದಲ್ಲಿ ಈ ಸಂಚಾರಿ ಶಾಲೆಯನ್ನು ಆರಂಭಿಸಲು ಸರ್ಕಾರ ಕ್ರಮ ಕೈಗೊಳ್ಳಲಾಗುತ್ತಿದೆಯೇ ; ವಿವರ ಒದಗಿಸುವುದು ?

ಪ್ರೊ॥ ಬಿ.ಕೆ ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಬೆಂಗೂರು ನಗರ ಜಿಲ್ಲೆಯಲ್ಲಿ ಸಂಚಾರಿ ಶಾಲೆಗಳನ್ನು ನಡೆಸಲಾಗುತ್ತಿದೆ. ಇದಕ್ಕೆ 04 ಸಂಚಾರಿ ವಾಹನಗಳನ್ನು ಉಪಯೋಗಿಸಲಾಗುತ್ತಿದೆ. ಸಂಚಾರಿ ಶಾಲೆಗಳಿಗೆ ದಾಖಲಾಗಿ ವ್ಯಾಸಂಗ ಮಾಡುತ್ತಿರುವ ಮಕ್ಕಳ ಸಂಖ್ಯೆ 259.

ಆ) 2002ರ ಡಿಸೆಂಬರ್‌ನಿಂದ 2003ರ ಜೂನ್ ಮಾಹೆಯವರೆಗೆ ದೊಡ್ಡಿಕುಂಟೇ (ಕಾಕ್ಸ್ ಟೌನ್) ಕೊಳಚೆ ಪ್ರದೇಶದಲ್ಲಿ ನಡೆಸಲಾಯಿತು ಹಾಗೂ ಸದರಿ ಸಂಚಾರಿ ಶಾಲೆಯಲ್ಲಿ ಕಲಿತ ಮಕ್ಕಳನ್ನು ದಿ: 13.6.2003ರಂದು ಕಾಕ್ಸ್ ಟೌನ್ ಸರ್ಕಾರಿ ತಮಿಳು ಹಾಗೂ ಕನ್ನಡ ಶಾಲೆಗಳಿಗೆ ದಾಖಲು ಮಾಡಲಾಯಿತು. ದಿ: 13–6–2003ರಿಂದ ಸಂಚಾರಿ ಶಾಲೆ ನಡೆಸುತ್ತಿಲ್ಲ.